# 2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಚಿತ್ರದುರ್ಗ

## ಎಸ್.ಸಿ./ಎಸ್.ಟಿ. ನಂ. 23/2025

ಪ್ರ.ವ.ಬೋ. ದಿನಾಂಕ – 22.04.2026

| | | | |
|---|---|---|---|
| ಸಾಕ್ಷಿದಾರರ ಹೆಸರು | – ರಂಗಸ್ವಾಮಿ | ಪ್ರಾ.ಸಾ. | – 07 |
| ತಂದೆಯ ಹೆಸರು | – ರಾಜಪ್ಪ | ಚಾ.ಸಾ. | – 17 |
| ವಯಸ್ಸು | – 27 ವರ್ಷ | | |
| ಉದ್ಯೋಗ | – ಕೂಲಿ ಕೆಲಸ | | |
| ವಾಸ ಸ್ಥಳ | – ರಾಮಘಟ್ಟ ಗ್ರಾಮ, ಹೊಳಲ್ಕೆರೆ ತಾ. | | |

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಖ್ಯ ವಿಚಾರಣೆ – ಸರ್ಕಾರಿ ಅಭಿಯೋಜಕರಿಂದ –**

ಸಾಕ್ಷಿಗೆ ದಿಃ 17.04.2025 ರ ಮಹಜರ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–6 ಎಂದು, ಸಾಕ್ಷಿಯ ಸಹಿಯನ್ನು ನಿಪಿ–6(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ರಾಮಘಟ್ಟದ ಸರ್ಕಾರಿ ಆಸ್ಪತ್ರೆಯ ಹತ್ತಿರ ಮಾಡಿರುತ್ತೇನೆ. ಸಾಕ್ಷಿಗೆ 6 ಪೋಟೋಗಳನ್ನು ತೋರಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–7 ರಿಂದ 12 ಎಂದು ಗುರುತಿಸಲಾಯಿತು. ಯಾವ ವಿಚಾರಕ್ಕೆ ಸಹಿ ಪಡೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ.

ಸಾಕ್ಷಿಗೆ ದಿಃ 17.04.2025 ರ ಇನ್ನೊಂದು ಮಹಜರ್ ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–13 ಎಂದು, ಸಾಕ್ಷಿಯ ಸಹಿಯನ್ನು ನಿಪಿ–13(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಪೋಲಿಸ್ ಠಾಣೆಯಲ್ಲಿ ಮಾಡಿರುತ್ತೇನೆ. ಪೋಲಿಸ್ ಠಾಣೆಯಲ್ಲಿ ಕಲ್ಲುಗಳನ್ನು ತೋರಿಸಿರುತ್ತಾರೆ. ಸಾಕ್ಷಿಗೆ 4 ಪೋಟೋಗಳನ್ನು ತೋರಿಸಿದ್ದು, ಅವುಗಳನ್ನು ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–14 ರಿಂದ 17 ಎಂದು ಗುರುತಿಸಲಾಯಿತು. ಯಾವ ವಿಚಾರಕ್ಕೆ ಸಹಿ ಪಡೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ

ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಮಹಜರ್ ಮಾಡುವಾಗ ವಿಡಿಯೋ ಮಾಡಿರುವುದಿಲ್ಲ. ಆರೋಪಿ ಮತ್ತು ಆಶಾ ಕೂಡಿ ಹೋಗಿರುವುದನ್ನು ನಾನು ನೋಡಿಲ್ಲ. ಪೋಲಿಸರಿಗೆ ನಾನು ಯಾವುದೇ ಹೇಳಿಕೆ ನೀಡಿಲ್ಲ. ಆರೋಪಿಯು ಆಶಾ ಇವರಿಂದ ಹಣ ಪಡೆದ ಬಗ್ಗೆ ನನಗೆ ಗೊತ್ತಿಲ್ಲ.

(ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಸಾಕ್ಷಿಯ ಸಾಕ್ಷ್ಯವನ್ನು ಪರಿಗಣಿಸಿ ಅನುಮತಿ ನೀಡಲಾಯಿತು. )

**ಪಾಟೀ ಸವಾಲುಃ ಮಾನ್ಯ ಅಭಿಯೋಜಕರಿಂದಃ**

ದಿಃ 17.04.2025 ರಂದು ಹೊಳಲ್ಕೆರೆ ತಾಲೂಕಿನ ರಾಮಘಟ್ಟ ಗ್ರಾಮದ ರಸ್ತೆಯಲ್ಲಿ ಈರಣ್ಣ ಅವರ ಜಮೀನಿನ ಪಕ್ಕದಲ್ಲಿ ಆರೋಪಿಯು ಆಶಾಳನ್ನು ಬೈಕ್ ನಲ್ಲಿ ಕೂರಿಸಿಕೊಂಡು ಹೋದ ಸ್ಥಳದಲ್ಲಿ ನಿಪಿ–6 ರಂತೆ ಮಹಜರ್ ಮಾಡಿ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಠಾಣೆಗೆ ಕರೆದುಕೊಂಡು ಬಂದಿದ್ದು, ಠಾಣೆಯಲ್ಲಿ ಸುಕೋ ತಂಡದವರು ಹಾಜರು ಪಡಿಸಿದ 2 ಕಲ್ಲುಗಳನ್ನು ಪೋಲಿಸರು ನಿಪಿ–13 ರಂತೆ ಮಹಜರ್ ಮಾಡಿ, ನಿಪಿ–14 ರಿಂದ 17 ರಂತೆ ಪೋಟೋ ತೆಗೆದು, ವಶಪಡಿಸಿಕೊಂಡರು ಎಂದರೆ ಸರಿಯಲ್ಲ. ಆ ಸಮಯದಲ್ಲಿ ಪೋಲಿಸರು ವಿಡಿಯೋ ಮಾಡಿರುತ್ತಾರೆ ಎಂದರೆ ಸರಿಯಲ್ಲ.

ದಿಃ 14.04.2025 ರಂದು ರಾತ್ರಿ 8.10 ರ ಸಮಯದಲ್ಲಿ ನಾನು ಮನೆಯಿಂದ ನಮ್ಮ ಗ್ರಾಮದ ರಂಗನಾಥಸ್ವಾಮಿ ದೇವಸ್ಥಾನದ ಕಡೆಗೆ ಹೋಗುವಾಗ ನಮ್ಮೂರಿನ ಸರ್ಕಾರಿ ಆರೋಗ್ಯ ಕೇಂದ್ರದ ಮುಂದೆ ಇರುವ ರಸ್ತೆಯಲ್ಲಿ ಕೊಡಗವಳ್ಳಿ ಗ್ರಾಮದ ಆರೋಪಿಯು ಆಶಾಳನ್ನು ಬೈಕ್ ನಲ್ಲಿ ಕೂರಿಸಿಕೊಂಡು ಹೋಗುವುದನ್ನು ನಾನು ನೋಡಿದ್ದು, ಮಾರನೇ ದಿನ ಆಶಾಳನ್ನು ಕೆಂಗುಟ್ಟೆ ಗ್ರಾಮದ ಸರ್ಕಾರಿ ಗೋಮಾಳ ಜಾಗಕ್ಕೆ ಹೋಗಿ ಆಶಾಳ ಶವವನ್ನು ನೋಡಿದ್ದು, ಆರೋಪಿಯು ಆಶಾಳ ತಲೆಗೆ ಕಲ್ಲಿನಿಂದ ಹೊಡೆದು ಕೊಲೆ ಮಾಡಿದ್ದು, ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ ಎಂದು ನಾನು ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ನಿರಾಕರಿಸಿದ ಹೇಳಿಕೆ ಭಾಗವನ್ನು ನಿಪಿ–18 ಎಂದು ಗುರುತಿಸಲಾಯಿತು. ನಿಪಿ–18 ರಂತೆ ಹೇಳಿಕೆ ನೀಡಿದ್ದರೂ ಕೂಡ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ಶ್ರೀ ಡಿ.ಎಂ.ಬಿ. ವಕೀಲರಿಂದ**

ಪಾಟೀ ಸವಾಲು ಇರುವುದಿಲ್ಲ.

**ಮರು ವಿಚಾರಣೆ ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

ವಿಶೇಷ, 2 ನೇ ಅಪರ ಜಿಲ್ಲಾ ಮತ್ತು ಸತ್ರ
ನ್ಯಾಯಾಧೀಶರು, ಚಿತ್ರದುರ್ಗ.